# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 731(947) |
| ಸದಸ್ಯರ ಹೆಸರು | : | ಶ್ರೀ ಎನ್.ರವಿಕುಮಾರ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 27.12.2022 |
| ಉತ್ತರಿಸುವವರು | : | ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ<br>ಸಾರ್ವಜನಿಕ ವಲಯ ಉದ್ಯಮಗಳ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳಲ್ಲಿರುವ ಪೌರಕಾರ್ಮಿಕರ ಸಂಖ್ಯೆ ಎಷ್ಟು; ಖಾಯಂ ನೌಕರರ ಸಂಖ್ಯೆ ಎಷು; ಮಹಿಳಾ ಪೌರಕಾರ್ಮಿಕರ ಸಂಖ್ಯೆ ಎಷ್ಟು; ಮಹಿಳಾ ಪೌರಕಾರ್ಮಿಕರಿಗೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ; ಕಳೆದ 3 ವರ್ಷಗಳಲ್ಲಿ ಎಷ್ಟು ಪೌರಕಾರ್ಮಿಕರನ್ನು ಖಾಯಂಗೊಳಿಸಲಾಗಿದೆ. | ರಾಜ್ಯದ ನಗರಸಭೆ/ಪುರಸಭೆ/ಪಟ್ಟಣಪಂಚಾಯಿತಿಗಳಲ್ಲಿ ಒಟ್ಟು 16626 (700:1) ಪೌರಕಾರ್ಮಿಕರ ಹುದ್ದೆಗಳು ಮಂಜೂರಾಗಿದ್ದು, ಅದರಲ್ಲಿ ಖಾಯಂ–5702, ನೇರಪಾವತಿ–5731 ಮತ್ತು ಹೊರಗುತ್ತಿಗೆ/ಗುತ್ತಿಗೆ/ದಿನಗೂಲಿ/ ಕ್ಷೇಮಾಭಿವೃದ್ಧಿ/ಇತರೆ–880 ಸೇರಿ ಒಟ್ಟು–12313 ಪೌರಕಾರ್ಮಿಕರುಗಳು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ. ಅದರಲ್ಲಿ ಖಾಯಂ ಮಹಿಳಾ ಪೌರಕಾರ್ಮಿಕರು–2362 ನೇರಪಾವತಿ–1929 ಮತ್ತು ಹೊರಗುತ್ತಿಗೆ/ಗುತ್ತಿಗೆ/ದಿನಗೂಲಿ/ ಕ್ಷೇಮಾಭಿವೃದ್ಧಿ/ಇತರೆ–286 ಸೇರಿ ಒಟ್ಟು–4577 ಮಹಿಳಾ ಪೌರಕಾರ್ಮಿಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ.<br>ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಹಿಳಾ ಪೌರಕಾರ್ಮಿಕರಿಗೆ ಪ್ರತ್ಯೇಕವಾದ ಶೌಚಾಲಯ ವ್ಯವಸ್ಥೆ, ಉಡುಪು ಬದಲಿಸಲು ಹಾಗೂ ಎಳೆ ಮಕ್ಕಳಿಗೆ ಹಾಲುಣಿಸಲು ಪ್ರತ್ಯೇಕ ಕೊಠಡಿಯನ್ನು ಕಲ್ಪಿಸುವಂತೆ ರಾಜ್ಯ ಎಲ್ಲಾ ನಗರಸ್ಥಳೀಯ ಸಂಸ್ಥೆಗಳಿಗೆ ನಿರ್ದೇಶನ ನೀಡಲಾಗಿರುತ್ತದೆ. ಪ್ರಸ್ತುತ ನಗರಸ್ಥಳಿಯ ಸಂಸ್ಥೆಗಳಲ್ಲಿ ಪ್ರತ್ಯೇಕ ಶೌಚಾಲಯ, ವೈಯಕ್ತಿಕ ಸುರಕ್ಷಾಧಿರಿಸು, ನಿಯಮಿತವಾದ ಆರೋಗ್ಯ ತಪಾಸಣೆ, ಬೆಳಗಿನ ಉಪಹಾರ, ಇನ್ಸುರೆನ್ಸ್, ಖಾಯಂ ಪೌರಕಾರ್ಮಿಕರು ನಿವೇಶನ ರಹಿತರಿದ್ದಲ್ಲಿ ನಿವೇಶನ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ. ಸರ್ಕಾರದ ಆದೇಶ ಸಂಖ್ಯೆ: 126 ಟಿಎಂಎಸ್ 2016 ದಿನಾಂಕ: 04.12.2017 ರೀತ್ಯಾ ಪೌರಕಾರ್ಮಿಕರನ್ನು ಒಂದು ಬಾರಿಗೆ ವಿಶೇಷ ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿರುವಂತೆ ಈಗಾಗಲೇ 30 ಜಿಲ್ಲೆಗಳಲ್ಲಿ ಅಧಿಸೂಚನೆ ಹೊರಡಿಸಲಾಗಿರುತ್ತದೆ. ಅಧಿಸೂಚನೆ ಹೊರಡಿಸಿದ 255 ನಗರ ಸ್ಥಳೀಯ ಸಂಸ್ಥೆಗಳಲ್ಲಿ 248 ನಗರ ಸ್ಥಳೀಯ ಸಂಸ್ಥೆಗಳಲ್ಲಿ ನೇಮಕಾತಿ ಪ್ರಕ್ರಿಯೆ ಪೂರ್ಣಗೊಂಡಿದ್ದು, 04 ನಗರ ಸ್ಥಳೀಯ ಸಂಸ್ಥೆಗಳಾದ ಕೆ.ಜಿ.ಎಫ್, ನೆಲಮಂಗಲ, ಚಿಕ್ಕೋಡಿ ಮತ್ತು |

| | | |
|---|---|---|
| | | ರಾಮದುರ್ಗದಲ್ಲಿ ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. ಉಳಿದಂತೆ ಬೆಳಗಾವಿ ಜಿಲ್ಲೆಯ ಖಾನಾಪುರ ಪಟ್ಟಣ ಪಂಚಾಯಿತಿಯಲ್ಲಿ ವಿಶೇಷ ನೇಮಕಾತಿ ಸಂಬಂಧ ಮಾನ್ಯ ಉಚ್ಚ ನ್ಯಾಯಾಲಯ ಧಾರವಾಡ ಪೀಠದಲ್ಲಿ ರಿಟ್ ಅರ್ಜಿ ಸಂ:105299/2022ನ್ನು ದಾಖಲಿಸಿರುವ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ: 15.12.2022 ರಂದು ಮಧ್ಯಂತರ ಆದೇಶ ನೀಡಿರುತ್ತದೆ. ಆದ್ದರಿಂದ 3 ನಗರ ಸ್ಥಳೀಯ ಸಂಸ್ಥೆಗಳ (ಚಳ್ಳಕೆರೆ, ಮಾಲೂರು ಮತ್ತು ಖಾನಾಪುರ) ನೇಮಕಾತಿ ಸಂಬಂಧ ಮಾನ್ಯ ನ್ಯಾಯಾಲಯದಲ್ಲಿ ಪ್ರಕರಣ ಬಾಕಿ ಇರುತ್ತದೆ. ಇಲ್ಲಿಯವರೆಗೆ 2528 ಪೌರಕಾರ್ಮಿಕರನ್ನು ವಿಶೇಷ ನೇಮಕಾತಿ ಮೂಲಕ ಖಾಯಂ ಮಾಡಿಕೊಳ್ಳಲಾಗಿರುತ್ತದೆ. |
| ಆ) | ಕಸ ವಿಲೇವಾರಿಗೆ ಎಷ್ಟು ಸಂಸ್ಥೆಗಳಿಗೆ ಗುತ್ತಿಗೆ ನೀಡಲಾಗಿದೆ; ಆ ಸಂಸ್ಥೆಗಳಲ್ಲಿರುವ ನೌಕರರ ಸಂಖ್ಯೆ ಎಷ್ಟು; ಕಸ ವಿಲೇವಾರಿಗೆ ಗುತ್ತಿಗೆ ಪಡೆದಿರುವ ಸಂಸ್ಥೆಗಳು ನಕಲಿ ಪೌರಕಾರ್ಮಿಕರ ಹೆಸರಿನಲ್ಲಿ ಬಿಲ್ಲು ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ನಕಲಿ ಪೌರಕಾರ್ಮಿಕರ ಹೆಸರಿನಲ್ಲಿ ಬಿಲ್ಲು ಪಡೆಯುತ್ತಿರುವ ಸಂಸ್ಥೆಗಳನ್ನು ಬ್ಲಾಕ್ ಲಿಸ್ಟ್‌ಗೆ ಸೇರಿಸಲು ಕ್ರಮ ಕೈಗೊಳ್ಳಲಾಗಿದೆಯೇ; | ಕಸ ವಿಲೇವಾರಿಗೆ 51 ಸಂಸ್ಥೆಗಳಿಗೆ ಗುತ್ತಿಗೆ ನೀಡಲಾಗಿದ್ದು, ಸದರಿ ಸಂಸ್ಥೆಯಡಿ 1009 ನೌಕರರು ಕೆಲಸ ನಿರ್ವಹಿಸುತ್ತಿರುವುದಾಗಿ ವರದಿಯಾಗಿರುತ್ತದೆ. ಕಸ ವಿಲೇವಾರಿಗೆ ಗುತ್ತಿಗೆ ಪಡೆದಿರುವ ಸಂಸ್ಥೆಗಳು ನಕಲಿ ಪೌರಕಾರ್ಮಿಕರ ಹೆಸರಿನಲ್ಲಿ ಬಿಲ್ಲು ಪಡೆಯುತ್ತಿರುವ ಬಗ್ಗೆ ಯಾವುದೇ ಪ್ರಕರಣಗಳು ದಾಖಲಾಗಿರುವುದಿಲ್ಲ. |
| ಇ) | ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳಲ್ಲಿರುವ ಪೌರಕಾರ್ಮಿಕರ ಜೀವನ ಮಟ್ಟ ಸುಧಾರಿಸಲು ಸರ್ಕಾರ ಕೈಗೊಂಡ ಯೋಜನೆಗಳೇನು? (ವಿವರ ನೀಡುವುದು) | ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ (ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳು) ವ್ಯಾಪ್ತಿಯಲ್ಲಿ ಸಕ್ರಿಯವಾಗಿ ಸ್ವಚ್ಛತಾ ಕಾರ್ಯಗಳನ್ನು ನಿರ್ವಹಿಸುತ್ತಿರುವ ಖಾಯಂ/ ಗುತ್ತಿಗೆ ಹಾಗೂ ನೇರಪಾವತಿಯ ಪೌರಕಾರ್ಮಿಕರು ಹಾಗೂ ಇತರೆ ಸ್ವಚ್ಛತಾ ಸಿಬ್ಬಂದಿಗಳ ಕಲ್ಯಾಣಕ್ಕೆ ಹೆಚ್ಚು ಒತ್ತು ನೀಡಿ, ಇವರ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಅಭಿವೃದ್ಧಿಗಾಗಿ ಮತ್ತು ಆರೋಗ್ಯ ರಕ್ಷಣೆಯ ಹಿತದೃಷ್ಟಿಯಿಂದ ಸರ್ಕಾರವು ವಿವಿಧ ಯೋಜನೆಗಳನ್ನು ಕಾರ್ಯರೂಪಕ್ಕೆ ತಂದಿದ್ದು ಈ ಕೆಳಕಂಡಂತೆ ಇರುತ್ತವೆ.<br><br>1. ಪೌರಕಾರ್ಮಿಕರ ಹಾಗೂ ಸ್ವಚ್ಛತಾ ಸಿಬ್ಬಂಧಿಗಳ ನಿಯಮಿತ ಆರೋಗ್ಯ ತಪಾಸಣೆ ಮತ್ತು ರೋಗ ಪ್ರತಿಬಂಧಕದ ಚುಚ್ಚುಮದ್ದು ನೀಡುವ ಕಾರ್ಯಕ್ರಮ.<br>2. ಪೌರಕಾರ್ಮಿಕರ ಹಾಗೂ ಸ್ವಚ್ಛತಾ ಸಿಬ್ಬಂದಿಗಳಿಗೆ ಸರ್ಕಾರದ ವಿಮಾ ಕಂಪನಿಗಳ ಅಪಘಾತ ವಿಮೆ ಹಾಗೂ ಆರೋಗ್ಯ |

| | | |
|---|---|---|
| | | ವಿಮೆ ಸೌಲಭ್ಯ ಒದಗಿಸಲಾಗುತ್ತಿದೆ.<br>3. ಪೌರಕಾರ್ಮಿಕರು ಹಾಗೂ ಸ್ವಚ್ಛತಾ ಸಿಬ್ಬಂಧಿಗಳಿಗೆ ಪ್ರತಿ ನಿತ್ಯ ಬೆಳಗಿನ ಉಪಹಾರ ನೀಡುವ ಕಾರ್ಯಕ್ರಮ.<br>4. ಪೌರಕಾರ್ಮಿಕ ಗೃಹಭಾಗ್ಯ ಯೋಜನೆಯಡಿಯಲ್ಲಿ ವಾಸ ಯೋಗ್ಯ ವಸತಿ ಸೌಲಭ್ಯ ಕಲ್ಪಿಸಲಾಗುತ್ತಿದೆ.<br>5. ಶೇ.24.10% ಪರಿಶಿಷ್ಟ ಜಾತಿ/ಪಂಗಡ ಕಲ್ಯಾಣ ಕಾರ್ಯಕ್ರಮದಲ್ಲಿ ಪೌರಕಾರ್ಮಿಕರಿಗೆ ಪ್ರಥಮ ಆದ್ಯತೆಯನ್ನು ನೀಡಿ ಆರೋಗ್ಯ, ಶಿಕ್ಷಣ, ಸ್ವಯಂ ಉದ್ಯೋಗ, ವಸತಿ ಮತ್ತು ಮೂಲಭೂತ ಸೌಕರ್ಯಗಳನ್ನು ನೀಡಲಾಗುತ್ತಿದೆ.<br>6. 2022-23 ನೇ ಸಾಲಿನಿಂದ ಪ್ರತಿ ಪೌರಕಾರ್ಮಿಕರಿಗೆ ಮಾಸಿಕ ರೂ. 2000/-ಗಳ ಸಂಕಷ್ಟ ಭತ್ಯೆಯನ್ನು ನೀಡಲಾಗುತ್ತಿದೆ. |

ಸಂಖ್ಯೆ: ನಅಇ 336 ಜಿಇಎಲ್ 2022(ಇ)

**ಎನ್. ನಾಗರಾಜು (ಎಂ.ಟಿ.ಬಿ)**

ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ಉದ್ದಿಮೆಗಳ ಸಚಿವರು